# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

## ಸಹಾಯಕ ಕಾರ್ಯಪಾಲಕ ಅಭಿಯಂತರರು, ಯಲಹಂಕ ಉಪ ವಿಭಾಗ

## ಕೆಂಪೇಗೌಡ ವಾರ್ಡ್ ನಂ-01ರಲ್ಲಿ ದಿನಾಂಕ: 05-12-2020 ರಂದು ನಡೆದ ಸಮಿತಿ ಸಭಾ ನಡವಳಿ.

ಕೆಳಕಂಡ ಸದಸ್ಯರು ಹಾಗೂ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿರುತ್ತಾರೆ.

1. ಶ್ರೀ.ರಜನಿಕಾಂತ್ ಮಲ್ಲಿ, ಅಧ್ಯಕ್ಷರು ಹಾಗೂ ನೊಡಲ್ ಅಧಿಕಾರಿಗಳು.
2. ಶ್ರೀ.ಮಲ್ಲಿನಾಥ ಮಲ್ಕಾಪುರ, ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿ.
3. ಶ್ರೀ. ವೆಂಕಟೇಶ್ ಮೂರ್ತಿ, ಹಿರಿಯ ಆರೋಗ್ಯ ಪರಿವೀಕ್ಷಕರು ಮತ್ತು ಸದಸ್ಯರು,
4. ಶ್ರೀ.ವಿವೇಕ್, ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ-01.

ವಾರ್ಡ್ ಸಮಿತಿಯ ಪ್ರಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

ಅ) ಹಿಂದಿನ ಸಭೆಯ ನಡವಳಿಗಳಲ್ಲಿದ್ದ ವಿಷಯಕ್ಕೆ ತೆಗೆದುಕೊಂಡ ಕ್ರಮದ ಬಗ್ಗೆ ಓದಿ ರೆಕಾರ್ಡ್ ಮಾಡಿರುವುದು.

| ಕ್ರ.ಸಂ | ವಿಷಯ ಸೂಚಿ | ನಿರ್ಣಯ | ಕ್ರಮ ತೆಗೆದುಕೊಳ್ಳಬೇಕಾದ ಅಧಿಕಾರಿ |
|---|---|---|---|
| 01 | ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶದಂತೆ ವಾರ್ಡ್ ನಂ-01ರ ಪ್ರದೇಶಗಳಲ್ಲಿ **ಸಾರ್ವಜನಿಕ ಶೌಚಾಲಯಗಳನ್ನು ನಿರ್ಮಾಣ ಮಾಡಲು, ಪಾದಚಾರಿ ಮಾರ್ಗಗಳನ್ನು ದುರಸ್ಥಿಪಡಿಸಿ ಹೊಸದಾಗಿ ನಿರ್ಮಾಣ ಮಾಡುವ** ಬಗ್ಗೆ ಕ್ರಮ ಕೈಗೊಳ್ಳುವ ಬಗ್ಗೆ ಚರ್ಚಿಸಲಾಯಿತು. | ಸಹಾಯಕ ಕಾರ್ಯಪಾಲಕ ಅಭಿಯಂತರರು, ಯಲಹಂಕ ಉಪ ವಿಭಾಗ | ಸಹಾಯಕ ಅಬಿಯಂತರರು (ವಾರ್ಡ್ ನಂ-01) |
| 02 | ಮನೆ ಮನೆಗಳಿಂದ ಹಾಗೂ ವಾಣಿಜ್ಯ ಸಂಕೀರ್ಣಗಳಿಂದ ಹಸಿಕಸ, ಒಣಕಸ ಮತ್ತು ಸ್ಯಾನಿಟರಿ ತ್ಯಾಜ್ಯಗಳನ್ನು ಬೇರ್ಪಡಿಸಿ ತೆಗೆದುಕೊಳ್ಳುವುದನ್ನು ಪರಿಶೀಲಿಸಲು ಸೂಚಿಸಲಾಯಿತು. | ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನತ್ಯಾಜ್ಯ ನಿರ್ವಹಣೆ ) ಯಲಹಂಕ ವಿಭಾಗ | ಆರೋಗ್ಯ ವೈದ್ಯಾಧಿಕಾರಿಗಳು (ಯಲಹಂಕ ವಲಯ) |

P.T.O.

| | | | |
|---|---|---|---|
| 03 | ವಾರ್ಡ್‌ನ ವ್ಯಾಪ್ತಿಯಲ್ಲಿ ಒಣಕಸ ಸಂಗ್ರಹಣಾ ಕೇಂದ್ರದಲ್ಲಿ ಅವಶ್ಯಕವಾಗಿರುವ ತೂಕದ ಯಂತ್ರ, ಕೂಲಿ ಕಾರ್ಮಿಕರ ರಿಜಿಸ್ಟರ್ ಪುಸ್ತಕ, ಇ.ಎಸ್.ಪಿ ಮತ್ತು ಪಿಎಫ್ ವಿವರಗಳನ್ನು ಹಾಗೂ ಅವರಿಗೆ ಕೆಲಸ ಮಾಡಲು ಅವಶ್ಯಕವಾದ ಕೈ ಗ್ಲೌಸ್, ಮಾಸ್ಕ್, ಗಮ್ ಬೂಟ್ಸ್, ಹಾಗೂ ಶೌಚಾಲಯದ ವ್ಯವಸ್ಥೆಗಳನ್ನು ಕಲ್ಪಿಸಿಕೊಡಲು ಐ.ಟಿ.ಸಿ ಯ ಸಿಬ್ಬಂದಿ, ಹಿರಿಯ ಹಾಗೂ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು. | ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನತ್ಯಾಜ್ಯ ನಿರ್ವಹಣೆ ) ಯಲಹಂಕ ವಿಭಾಗ | ಆರೋಗ್ಯ ವೈದ್ಯಾಧಿಕಾರಿಗಳು (ಯಲಹಂಕ ವಲಯ) |
| 03 | ವಾರ್ಡ್‌ಗಳ ವ್ಯಾಪ್ತಿಯಲ್ಲಿರುವ ಅಪೂರ್ಣ ಆಸ್ಪತ್ರೆಯವರು ಬಯೋ ಮೆಡಿಕಲ್ ವೇಸ್ಟ್‌ಅನ್ನು ಪಾದಚಾರಿ ಮಾರ್ಗದಲ್ಲಿ ಶೇಖರಿಸುತ್ತಿರುವುದರಿದ ಸಾರ್ವಜನಿಕರ ಒಡಾಟಕ್ಕೆ ತುಂಬಾ ತೊಂದರೆ ಉಂಟಾಗಿದ್ದು, ಕೂಡಲೇ ಆಸ್ಪತ್ರೆಯವರಿಗೆ ದಂಡ ವಿಧಿಸಬೇಕೆಂದು ಸೂಚಿಸಿದರು. | ಹಿರಿಯ ಆರೋಗ್ಯ ಪರಿವೀಕ್ಷಕರು (ವಾರ್ಡ್ ನಂ-01) | ಆರೋಗ್ಯ ವೈದ್ಯಾಧಿಕಾರಿಗಳು (ಯಲಹಂಕ ವಲಯ) |
| 04 | ವಾರ್ಡ್ ನಂ -01ರ ವ್ಯಾಪ್ತಿಯಲ್ಲಿರುವ ಕೆ.ಹೆಚ್.ಬಿ ಕಾಲೋನಿ ಯಲಹಂಕ ಗಾಂಧಿನಗರದಲ್ಲಿ ಹಾಲಿ ರಸ್ತೆ ಮತ್ತು ಚರಂಡಿ ಕಾಮಗಾರಿಗಳು ನಡೆಯುತ್ತಿದ್ದು, ಕಲ್ವರ್ಟ್ ಕಾಮಗಾರಿಗೆ ಸಂಬಂದಿಸಿದ ಕವರಿಂಗ್ ಸ್ಲ್ಯಾಬ್‌ಗಳು ಅಳವಡಿಸಿರುವುದಿಲ್ಲ ಎಂದು ಶ್ರೀ. ಅ. ಬ ಶಿವಕುಮಾರ್ ರವರು ಸಬೆಗೆ ದೂರನ್ನು ನೀಡಿದರು. | ಸಹಾಯಕ ಅಭಿಯಂತರರು (ಕೆಂಪೇಗೌಡ ವಾರ್ಡ್ ನಂ - 01) | ಕಾರ್ಯಪಾಲಕ ಅಭಿಯಂತರರು ಯಲಹಂಕ ವಿಭಾಗ |

ಆ) ವಾರ್ಡ್ ವ್ಯಾಪ್ತಿಯಲ್ಲಿನ ಪ್ರದೇಶಗಳಲ್ಲಿ ಸಾರ್ವಜನಿಕ ಶೌಚಾಲಯಗಳನ್ನು ನಿರ್ಮಾಣ ಮಾಡಲು, ಪಾದಚಾರಿ ಮಾರ್ಗಗಳಲ್ಲಿಟ್ಟಿರುವ ಅಂಗಡಿಗಳನ್ನು ತೆರವುಗೊಳಿಸಲು ಬಗ್ಗೆ ಈ ಕೆಳಕಂಡಂತೆ ಚರ್ಚಿಸಲಾಯಿತು

1. ವಾರ್ಡ್ ನಂ -01ರ ವ್ಯಾಪ್ತಿಯಲ್ಲಿರುವ **ಸರ್ಕಾರಿ ಆಸ್ಪತ್ರೆ ಹತ್ತಿರ, ವೆಂಕಟಾಲ ಅಂಗನವಾಡಿ ಕೇಂದ್ರ ಹತ್ತಿರ, ಸಾರ್ವಜನಿಕರ ಶೌಚಾಲಯಗಳನ್ನು** ನಿರ್ಮಾಣ ಮಾಡುವ ಬಗ್ಗೆ ಚರ್ಚಿಸಲಾಯಿತು.
2. ವಾರ್ಡ್ ನಂ -01ರ ವೆಂಕಟಾಲ ಗ್ರಾಮದಲ್ಲಿರುವ ಚರಂಡಿಗಳಲ್ಲಿ ತುಂಬಿರುವ ಹೂಳನ್ನು ತೆಗೆಯುವಂತೆ ಸಾರ್ವಜನಿಕರು ಕೋರಿದ್ದು, ಇದಕ್ಕೆ ಸಂಬಂದಿಸಿದ ಸಹಾಯಕ ಅಭಿಯಂತರರು ಕಾಮಗಾರಿ ಪ್ರಾರಂಭಿಸುವುದಾಗಿ ಸಭೆಗೆ ತಿಳಿಸಿದರು.
3. ವಾರ್ಡ್ ನಂ -01ರ ವ್ಯಾಪ್ತಿಯಲ್ಲಿ ಡೌನ್ ಬಜಾರ್ ರಸ್ತೆಯ ಚರಂಡಿಯ ಮೇಲೆ ಕವರಿಂಗ್ ಸ್ಲ್ಯಾಬ್‌ಗಳನ್ನು ಆಳವಡಿಸುವ ಬಗ್ಗೆ ಸಭೆಗೆಯಲ್ಲಿ ಚರ್ಚಿಸಲಾಯಿತು.
4. ವಾರ್ಡ್ ನಂ -01ರ ವ್ಯಾಪ್ತಿಯಲ್ಲಿರುವ ಸುರಭಿ ಬಡಾವಣೆಯ 2ನೇ ಮುಖ್ಯರಸ್ತೆಯಲ್ಲಿ ಕಲ್ವರ್ಟ್‌ಗಳ ಮೇಲೆ ಕವರಿಂಗ್ ಸ್ಲ್ಯಾಬ್‌ಗಳನ್ನು ಆಳವಡಿಸುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು.

P.T.O

5. ವಾರ್ಡ್ ನಂ -01ರ ವ್ಯಾಪ್ತಿಯಲ್ಲಿ ಸರ್ಕಾರಿ ಆಸ್ಪತ್ರೆಯ ರಸ್ತೆಯಲ್ಲಿರುವ ಪಾದಚಾರಿ ಮಾರ್ಗದಲ್ಲಿ ತಳ್ಳುವ ಗಾಡಿಗಳನ್ನು ತೆರವುಗೊಳಿಸುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು.
6. ವಾರ್ಡ್ ನಂ -01ರ ವ್ಯಾಪ್ತಿಯಲ್ಲಿ ನೆಹರು ನಗರದಲ್ಲಿರುವ ಸಾಯಿ ಗೋಲ್ಡ್ ಪ್ಯಾಲೇಸ್ ಹತ್ತಿರ ಬ್ಲಾಕ್ ಸ್ಪಾಟ್ ತೆರವುಗೊಳಿಸುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು.
7. ವಾರ್ಡ್ ನಂ -01ರ ರಸ್ತೆಗಳಲ್ಲಿ ಮರದ ರೆಂಬೆಗಳು ರಸ್ತೆಗೆ ಅಡ್ಡವಾಗಿರುವುದರಿಂದ ಸದರಿ ರೆಂಬೆಗಳನ್ನು ಕಟಾವುಮಾಡುವಂತೆ ಸಭೆಯಲ್ಲಿ ಸೂಚಿಸಲಾಯಿತು.
8. ವಾರ್ಡ್ ನಂ -01ರ ವ್ಯಾಪ್ತಿಯಲ್ಲಿರುವ ಗ್ರಂಥಾಲಯದ ಕಟ್ಟಡ ಸೋರುತ್ತಿರುವುದರಿಂದ ಸದರಿ ಕಟ್ಟಡವನ್ನು ದುರಸ್ಥಿಗೊಳಿಸುವ ಬಗ್ಗೆ ಸಭೆಯಲ್ಲಿ ಸೂಚಿಸಲಾಯಿತು.

ಮೇಲ್ಕಂಡ ಎಲ್ಲಾ ಅಂಶಗಳಿಗೂ ಕ್ರಮ ಕೈಗೊಳ್ಳಬೇಕಾದ ಎಲ್ಲಾ ಅಧಿಕಾರಿಗಳು ಸೂಕ್ತ ಕ್ರಮ ತೆಗೆದುಕೊಂಡು ಮುಂದಿನ ಸಭೆಗೆ ಪೂರ್ಣ ಮಾಹಿತಿಯೊಂದಿಗೆ ಎಲ್ಲಾ ಅಧಿಕಾರಿಗಳು ಹಾಜರಾಗಲು ಮಾನ್ಯ ಅಧ್ಯಕ್ಷರು ಸಭೆಯಲ್ಲಿ ಸೂಚಿಸಿದರು. ಮುಂದಿನ ಸಭೆಯಲ್ಲಿ ಸಾಧಿಸಬೇಕಾದ ಗುರಿ ಹಾಗೂ ಸಾದನೆ ಬಗ್ಗೆ ಚರ್ಚಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಕಮಿಟಿ, ವಾರ್ಡ್ ನಂ. 01(ಕೆಂಪೇಗೌಡ)

ವಾರ್ಡ್ ಸಮಿತಿ ಅಧ್ಯಕ್ಷರು
ಹಾಗೂ ವಾರ್ಡ್‌ನ ನೋಡೆಲ್ ಅಧಿಕಾರಿಗಳು
ವಾರ್ಡ್ ಕಮಿಟಿ, ವಾರ್ಡ್ ನಂ. 01(ಕೆಂಪೇಗೌಢ)

**ಪ್ರತಿಯನ್ನು:**

ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ಸದಸ್ಯರುಗಳ ಮಾಹಿತಿಗಾಗಿ.

1. ಶ್ರೀ.ರಜನಿಕಾಂತ್ ಮಲ್ಲಿ, ಅಧ್ಯಕ್ಷರು ಹಾಗೂ ನೊಡಲ್ ಅಧಿಕಾರಿಗಳು.

## ಅಧಿಕಾರಿಗಳ ಮಾಹಿತಿಗಾಗಿ.

1. ಮಾನ್ಯ ಜಂಟಿ ಆಯುಕ್ತರು ಯಲಹಂಕ ವಲಯರವರ ಮಾಹಿತಿಗಾಗಿ.
2. ಮಾನ್ಯ ಮುಖ್ಯ ಅಭಿಯಂತರರು ಯಲಹಂಕ ವಲಯರವರ ಮಾಹಿತಿಗಾಗಿ.
3. ಆರೋಗ್ಯ ವೈದ್ಯಾಧಿಕಾರಿಗಳು ಯಲಹಂಕ ವಲಯರವರ ಮಾಹಿತಿಗಾಗಿ.
4. ವಲಯ ಅರಣ್ಯಾಧಿಕಾರಿಗಳು ಯಲಹಂಕ ವಲಯರವರ ಮಾಹಿತಿಗಾಗಿ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, (ಬೃ.ನಿ.ಗಾ) ವಿಭಾಗ ರವರ ಮಾಹಿತಿಗಾಗಿ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ರವರ ಸೂಕ್ತ ಕ್ರಮಕ್ಕಾಗಿ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ ವಿಭಾಗ ಬಿ.ಬಿ.ಎಂ.ಪಿ ರವರ ಸೂಕ್ತ ಕ್ರಮಕ್ಕಾಗಿ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, (ವಿದ್ಯುತ್) ಯಲಹಂಕರವರ ಸೂಕ್ತ ಕ್ರಮಕ್ಕಾಗಿ.